Akashvani : Bangalore
Regional Bulletin In Kannada
19.10.2026 / 19.35 hrs
ಆಕಾಶವಾಣಿ ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಭಾರತ-ನ್ಯೂಜಿಲೆಂಡ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ನಾಳೆಯಿಂದ ಜಾರಿಗೆ
- ಕೃಷಿ ಕಲ್ಯಾಣ ಪೋರ್ಟಲ್‌ಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಚಾಲನೆ
- ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಶೀಘ್ರ ಅಂತಿಮ- ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ
- ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರಿಂದ ಯುವ ಕಲಾವಿದರಿಗೆ 'ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರ' ಪ್ರದಾನ
- ಏಷ್ಯನ್ ಪ್ಯಾರಾ ಕ್ರೀಡಾಕೂಟ: ಪುರುಷರ ಉದ್ದ ಜಿಗಿತ ಸ್ಪರ್ಧೆಯಲ್ಲಿ ನಿಶಾದ್ ಕುಮಾರ್‌ಗೆ ಚಿನ್ನ

---

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ನಾಳೆಯಿಂದ ಜಾರಿಗೆ ಬರಲಿದೆ. ಈ ಒಪ್ಪಂದದಡಿ ನ್ಯೂಜಿಲೆಂಡ್‌ಗೆ ಭಾರತದ ಶೇಕಡಾ ೧೦೦ರಷ್ಟು ರಫ್ತುಗಳಿಗೆ ಸುಂಕ ಮುಕ್ತ ಪ್ರವೇಶ ದೊರೆಯಲಿದೆ.

ನವದೆಹಲಿಯಲ್ಲಿ ಇಂದು ನಡೆದ ಸಮಾರಂಭದಲ್ಲಿ ಮಾತನಾಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಈ ಒಪ್ಪಂದವು ೨೦೪೭ರ ವಿಕಸಿತ ಭಾರತ ನಿರ್ಮಿಸುವ ಪ್ರಧಾನಿ ನರೇಂದ್ರ ಮೋದಿ ಅವರ ಆಶಯಕ್ಕೆ ಪೂರಕವಾಗಿದೆ ಎಂದು ಹೇಳಿದರು.

ಈ ಒಪ್ಪಂದವು ಭಾರತೀಯ ರೈತರು, ಕುಶಲಕರ್ಮಿಗಳು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಔಷಧ ವಲಯಕ್ಕೆ ಹೊಸ ಅವಕಾಶಗಳನ್ನು ಕಲ್ಪಿಸಲಿದೆ. ೨೦೩೦ರ

ವೇಳೆಗೆ ಉಭಯ ದೇಶಗಳ ನಡುವಿನ ಸರಕು ಮತ್ತು ಸೇವೆಗಳ ವ್ಯಾಪಾರವನ್ನು ಸುಮಾರು ೨೫ ಸಾವಿರ ಕೋಟಿ ರೂಪಾಯಿಗೆ ದ್ವಿಗುಣಗೊಳಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಭಾರತದಲ್ಲಿ ೨೦ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆಗೆ ನೆರವು ನೀಡುವ ಬದ್ಧತೆಯನ್ನು ನ್ಯೂಜಿಲೆಂಡ್ ವ್ಯಕ್ತಪಡಿಸಿದ್ದು, ಇದರಿಂದ ಉತ್ಪಾದನೆ, ಮೂಲಸೌಕರ್ಯ ಮತ್ತು ಉದ್ಯೋಗಾವಕಾಶಗಳಿಗೆ ಉತ್ತೇಜನ ದೊರೆಯಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಹಣ್ಣುಗಳು, ತರಕಾರಿಗಳು, ಸಾಂಬಾರ ಪದಾರ್ಥಗಳು ಮತ್ತು ಇತರ ಕೃಷಿ ಉತ್ಪನ್ನಗಳ ರಫ್ತಿಗೆ ಭಾರತದ ರೈತರಿಗೆ ಹೆಚ್ಚಿನ ಮಾರುಕಟ್ಟೆ ಅವಕಾಶಗಳು ದೊರೆಯಲಿವೆ. ಇದರಿಂದ ಉತ್ಪಾದಕತೆ ಹೆಚ್ಚಳ, ಆದಾಯ ವೃದ್ಧಿ ಹಾಗೂ ಜೀವನೋಪಾಯ ಬಲವರ್ಧನೆಗೆ ನೆರವಾಗಲಿದೆ ಎಂದ ಸಚಿವ ಪಿಯೂಷ್ ಗೋಯಲ್, ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಹೈನುಗಾರಿಕೆ ಸೇರಿದಂತೆ ಸೂಕ್ಷ್ಮ ವಲಯಗಳಿಗೆ ರಕ್ಷಣೆ ಮುಂದುವರಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

---

ರೈತರಿಗಾಗಿ ನವೀಕರಿಸಿದ ಕೃಷಿ ಕಲ್ಯಾಣ ಪೋರ್ಟಲ್ ಅನ್ನು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಉದ್ಘಾಟಿಸಿದರು.

ದೇಶಾದ್ಯಂತದ ರೈತರಿಗೆ ಸರ್ಕಾರಿ ಯೋಜನೆಗಳು, ಆರ್ಥಿಕ ನೆರವು ಮತ್ತು ವಿಶ್ವಾಸಾರ್ಹ ಕೃಷಿ ಮಾಹಿತಿಯನ್ನು ಅವರ ಮೊಬೈಲ್ ಫೋನ್‌ಗಳಲ್ಲಿ ನೇರ, ಸುಲಭ ಪ್ರವೇಶವನ್ನು ಒದಗಿಸುವ ಗುರಿಯನ್ನು ಈ ಪೋರ್ಟಲ್ ಹೊಂದಿದೆ. ಇದು ಕಾರ್ಯವಿಧಾನದ ಅಡೆತಡೆಗಳು ಮತ್ತು ಮಧ್ಯವರ್ತಿಗಳ ಪಾತ್ರವನ್ನು ನಿವಾರಿಸುತ್ತದೆ.

ಉದ್ಘಾಟನಾ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವರು, ನವೀಕರಿಸಿದ ಪೋರ್ಟಲ್‌ನಿಂದಾಗಿ, ರೈತರು ಇನ್ನು ಮುಂದೆ ಯೋಜನೆಗಳ ಬಗ್ಗೆ ಮಾಹಿತಿಯನ್ನು ಪಡೆಯಲು ಅಥವಾ ಅರ್ಜಿಗಳನ್ನು ಸಲ್ಲಿಸಲು ಸರ್ಕಾರಿ ಕಚೇರಿಗಳಿಗೆ ಅಥವಾ ವಿವಿಧ ವೆಬ್‌ಸೈಟ್‌ಗಳಲ್ಲಿ ಭೇಟಿ ನೀಡಬೇಕಾಗಿಲ್ಲ ಎಂದು ಹೇಳಿದರು. ಈ ವೇದಿಕೆಯು ರೈತ ಉತ್ಪಾದಕ ಸಂಸ್ಥೆಗಳು, ಪ್ರಾಥಮಿಕ ಕೃಷಿ ಸಾಲ ಸಂಘಗಳು, ಕೃಷಿ ವಿಜ್ಞಾನಿಗಳು, ಸಂಶೋಧಕರು ಮತ್ತು ನವೋದ್ಯಮಗಳನ್ನು

ಒಟ್ಟುಗೂಡಿಸುತ್ತದೆ. ವ್ಯಾಪಕ ಕೃಷಿ ಪರಿಸರ ವ್ಯವಸ್ಥೆಗೆ ಸಾಮಾನ್ಯ ಡಿಜಿಟಲ್ ವೇದಿಕೆ ಸೃಷ್ಟಿಸುತ್ತದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದರು.

---

ಭಾರತದೊಂದಿಗೆ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ಹಂತಕ್ಕೆ ಅಮೆರಿಕ ಬಂದಿದೆ ಎಂದು ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ಹೇಳಿದ್ದಾರೆ.

ಉಜ್ಬೇಕಿಸ್ತಾನ್‌ನ ಸಮರ್ಕಂಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಷ್ಯಾದ ತೈಲ ಮತ್ತು ಅನಿಲವನ್ನು ಆಮದು ಮಾಡಿಕೊಳ್ಳುವ ದೇಶಗಳಿಗೆ ನಿರ್ಬಂಧಗಳನ್ನು ತಾತ್ಕಾಲಿಕವಾಗಿ ರದ್ದು ಮಾಡುವ ಅಮೆರಿಕ ನಿರ್ಧಾರವನ್ನು ಸಮರ್ಥಿಸಿಕೊಂಡರು.

ಜಾಗತಿಕ ಇಂಧನ ಪೂರೈಕೆ ಮತ್ತು ಬೆಲೆಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುವ ಗುರಿಯನ್ನು ಈ ಕ್ರಮ ಹೊಂದಿದೆ. ಭೌಗೋಳಿಕತೆ ಮತ್ತು ಪರ್ಯಾಯ ಪೂರೈಕೆದಾರರಿಂದ ಇಂಧನವನ್ನು ಪಡೆಯುವಲ್ಲಿನ ತೊಂದರೆ ಸೇರಿದಂತೆ ಪ್ರತಿಯೊಂದು ದೇಶವು ತನ್ನದೇ ಆದ ಸಂದರ್ಭಗಳನ್ನು ಪರಿಗಣಿಸಬೇಕು ಎಂದು ಅವರು ತಿಳಿಸಿದರು.

ಮಾರ್ಕೊ ರುಬಿಯೊ ನಾಳೆ ಮುಂಬೈಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ.

---

ಪೋಲೆಂಡ್ ಗಣರಾಜ್ಯದ ಪ್ರಧಾನಿ ಡೊನಾಲ್ಡ್ ಟಸ್ಕ್ ಇದೇ ಬುಧವಾರದಿಂದ ಭಾರತಕ್ಕೆ ಮೂರು ದಿನಗಳ ಭೇಟಿ ನೀಡಲಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಅವರು ಭಾರತಕ್ಕೆ ಭೇಟಿ ನೀಡುತ್ತಿದ್ದಾರೆ. ಅವರೊಂದಿಗೆ ಪೋಲೆಂಡ್‌ನ ಹಣಕಾಸು ಮತ್ತು ಆರ್ಥಿಕ ಸಚಿವ ಆಂಡ್ರೆಜ್ ಡೊಮಾನ್ಸ್ಕಿ ಹಾಗೂ ಉದ್ಯಮ ನಿಯೋಗ ಆಗಮಿಸಲಿದೆ.

ತಮ್ಮ ಭೇಟಿಯ ಸಂದರ್ಭದಲ್ಲಿ, ಡೊನಾಲ್ಡ್ ಟಸ್ಕ್ ಅವರು ಗುರುವಾರ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ ಉಭಯ ನಾಯಕರು,

ದ್ವಿಪಕ್ಷೀಯ ಸಂಬಂಧಗಳ ಸಮಗ್ರ ಪರಿಶೀಲನೆ ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

ಡೊನಾಲ್ಡ್ ಟಸ್ಕ್ ಅವರು ಬೆಂಗಳೂರಿಗೂ ಭೇಟಿ ನೀಡಲಿದ್ದು, ಮಾಹಿತಿ ತಂತ್ರಜ್ಞಾನ ಮತ್ತು ಬಾಹ್ಯಾಕಾಶ ವಲಯ ಸೇರಿದಂತೆ ವಿವಿಧ ಉದ್ಯಮ ವಲಯದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಈ ತಿಂಗಳ ೨೨ ರಂದು ನವದೆಹಲಿಯಲ್ಲಿ ಮತ್ತು ೨೩ ರಂದು ಬೆಂಗಳೂರಿನಲ್ಲಿ ಭಾರತ-ಪೋಲೆಂಡ್ ಉದ್ಯಮ ವ್ಯಾಪಾರ ವೇದಿಕೆ ಸಮಾವೇಶ ನಡೆಯಲಿದೆ.

---

'ವಿಕಸಿತ ಭಾರತ'ದ ಕನಸನ್ನು ಕೇವಲ ಉತ್ತಮ ಮೂಲಸೌಕರ್ಯ ಮತ್ತು ಭೌತಿಕ ಪ್ರಗತಿಯ ಮೂಲಕ ಮಾತ್ರ ಸಾಕಾರಗೊಳಿಸಲು ಸಾಧ್ಯವಿಲ್ಲ. ಇದರಲ್ಲಿ ಕಲೆ, ಸಂಸ್ಕೃತಿ ಮತ್ತು ಪರಂಪರೆಗಳು ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅಭಿಪ್ರಾಯಪಟ್ಟಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರ' ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಭಾರತದ ಆತ್ಮ ಮತ್ತು ನಿಜವಾದ ಗುರುತು ಅದರ ಸಾಂಸ್ಕೃತಿಕ ಸಂಪ್ರದಾಯಗಳು ಹಾಗೂ ಪರಂಪರೆಯಲ್ಲಿ ಅಡಗಿದೆ. ದೇಶವು ಈಗ ಪರಿವರ್ತನೆಯ ಯುಗದಲ್ಲಿದ್ದು, ಜಾಗತಿಕ ಮಟ್ಟದಲ್ಲಿ ಭಾರತದ ಗುರುತು ಮತ್ತು ಸ್ಥಾನಮಾನಗಳಿಗೆ ಮನ್ನಣೆ ಸಿಗುತ್ತಿದೆ. ಈ ಪರಿವರ್ತನೆಯಲ್ಲಿ ಕಲಾವಿದರು ಮಹತ್ವದ ಪಾತ್ರ ವಹಿಸಬೇಕಿದೆ ಎಂದು ಸಲಹೆ ನೀಡಿದರು.

ಸಂಗೀತ ನಾಟಕ ಅಕಾಡೆಮಿಯು ನೀಡುವ 'ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರ'ವನ್ನು, ಪ್ರದರ್ಶನ ಕಲೆಗಳ ಕ್ಷೇತ್ರದಲ್ಲಿ ಸಾಧನೆ ಮಾಡಿದ ದೇಶದ ೧೦೯ ಯುವ ಕಲಾವಿದರಿಗೆ  ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಪ್ರದಾನ ಮಾಡಿದರು.

---

ಇನ್‌ಸ್ಟಾಗ್ರಾಮ್ ಮತ್ತು ಫೇಸ್‌ಬುಕ್‌ನ ಮಾತೃಸಂಸ್ಥೆಯಾದ ಮೆಟಾ, ತನ್ನ ಶಿಫಾರಸುಗಳ ಮೂಲಕ ಬಳಕೆದಾರರಿಗೆ ಒಂದೇ ಅಥವಾ ಸೀಮಿತ ವಿಚಾರಧಾರೆಗಳ ವಿಷಯಗಳು ಅತಿಯಾಗಿ ತಲುಪದಂತೆ ಕ್ರಮ ಕೈಗೊಳ್ಳಬೇಕೆಂದು ಕೇಂದ್ರ ಸರ್ಕಾರ ಸೂಚಿಸಿದೆ.

ಈ ಸಂಬಂಧ ಸಲಹೆ, ಸೂಚನೆ ನೀಡಿರುವ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ಸಾರ್ವಜನಿಕ ಅಶಾಂತಿಗೆ ಕಾರಣವಾಗಬಹುದಾದ ಅಥವಾ ಹಿಂಸಾಚಾರ ಹಾಗೂ ಇತರ ಕಾನೂನುಬಾಹಿರ ಚಟುವಟಿಕೆಗಳಿಗೆ ಪ್ರಚೋದನೆ ನೀಡಬಹುದಾದ ವಿಷಯಗಳ ಮೇಲೆ ಹೆಚ್ಚಿನ ನಿಗಾ ವಹಿಸುವಂತೆ ಮೆಟಾಗೆ ತಿಳಿಸಿದೆ.

ಪ್ರಸ್ತುತ ನಡೆಯುತ್ತಿರುವ ಸಾರ್ವಜನಿಕ ಘಟನೆಗಳಿಗೆ ಸಂಬಂಧಿಸಿದ ಛಾಯಾಚಿತ್ರಗಳು, ವಿಡಿಯೊಗಳು, ಗ್ರಾಫಿಕ್ಸ್ ಅಥವಾ ಇತರ ವಿಷಯಗಳನ್ನು ಪ್ರಕಟಿಸುವಾಗ ಸೂಕ್ತ ಹಿನ್ನೆಲೆ ಮಾಹಿತಿಯನ್ನು ಒದಗಿಸುವಂತೆ ಸಚಿವಾಲಯ ನಿರ್ದೇಶಿಸಿದೆ.

---

ಫ್ರಾನ್ಸ್‌ನಲ್ಲಿ ಹಿಂಸಾತ್ಮಕ ಪ್ರತಿಭಟನೆಗಳಿಗೆ ಕಾರಣವಾದ ಭದ್ರತಾ ವೈಫಲ್ಯಗಳ ಬಗ್ಗೆ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಕಳವಳ ವ್ಯಕ್ತಪಡಿಸಿದ್ದಾರೆ.

ಆದರೆ, ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಆಂತರಿಕ ಸಚಿವ ಲಾರೆಂಟ್ ನುನೆಜ್ ಅವರ ರಾಜೀನಾಮೆಯನ್ನು ಅವರು ತಿರಸ್ಕರಿಸಿದ್ದಾರೆ. ಸ್ಥಳೀಯ ಮಾಧ್ಯಮಗಳ ವರದಿಗಳ ಪ್ರಕಾರ, ಪ್ರತಿಭಟನೆಗಳ ಸಂದರ್ಭದಲ್ಲಿ ನಗರಸಭೆ ಕಟ್ಟಡಗಳಿಗೆ ಬೆಂಕಿ ಹಚ್ಚಲಾಗಿದ್ದು, ನೂರಾರು ವಾಣಿಜ್ಯ ಮಳಿಗೆಗಳನ್ನು ಲೂಟಿ ಮಾಡಲಾಗಿದೆ ಹಾಗೂ ಹಾನಿಗೊಳಿಸಲಾಗಿದೆ. ಈ ಸಂಬಂಧ ಕನಿಷ್ಠ ೨ ಸಾವಿರದ ೪೦೦ ಮಂದಿಯನ್ನು ಬಂಧಿಸಲಾಗಿದೆ.

---

ಜಪಾನ್‌ನ ಐಚಿ-ನಗೋಯಾದಲ್ಲಿ ನಡೆಯುತ್ತಿರುವ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾರತ ಪದಕಗಳ ಸಂಖ್ಯೆ ೧೧ಕ್ಕೆ ಏರಿದೆ. ಭಾರತ ಈವರೆಗೆ ೪ ಚಿನ್ನ, ೫ ಬೆಳ್ಳಿ ಮತ್ತು ೨ ಕಂಚಿನ ಪದಕಗಳನ್ನು ಗೆದ್ದಿದೆ.

ಪುರುಷರ ಉದ್ದ ಜಿಗಿತದ ಟಿ-೪೭ ವಿಭಾಗದಲ್ಲಿ ನಿಶಾದ್ ಕುಮಾರ್ ೭.೧೧ ಮೀಟರ್ ಜಿಗಿತದೊಂದಿಗೆ ಭಾರತಕ್ಕೆ ಪ್ಯಾರಾ ಅಥ್ಲೆಟಿಕ್ಸ್‌ನ ಮೊದಲ ಚಿನ್ನದ ಪದಕ ತಂದುಕೊಟ್ಟರು.

ಮಹಿಳೆಯರ ಒಂದು ಸಾವಿರದ ೫೦೦ ಮೀಟರ್ ಟಿ-೧೧, ಟಿ-೧೩ ವಿಭಾಗದಲ್ಲಿ ಸೌಮ್ಯ ಚಿನ್ನ ಗೆದ್ದರೆ, ರಾಧಾ ವೆಂಕಟೇಶ್ ಬೆಳ್ಳಿ ಪದಕ ಪಡೆದರು. ಪುರುಷರ ಜಾವೆಲಿನ್ ಎಫ್-೪೬ ವಿಭಾಗದಲ್ಲಿ ರಿಂಕು ಚಿನ್ನ ಹಾಗೂ ಅಜೀತ್ ಸಿಂಗ್ ಬೆಳ್ಳಿ ಗೆದ್ದಿದ್ದಾರೆ.

ಮಹಿಳೆಯರ ೧೦ ಮೀಟರ್ ಏರ್ ರೈಫಲ್ ಎಸ್‌ಎಚ್-೧ ವಿಭಾಗದಲ್ಲಿ ಮೋನಾ ಅಗರ್ವಾಲ್, ಕ್ರೀಡಾಕೂಟ ದಾಖಲೆಯೊಂದಿಗೆ ಚಿನ್ನ ಗೆದ್ದರೆ, ಅವನಿ ಲೇಖರಾ ಬೆಳ್ಳಿ ಪದಕ ಪಡೆದರು.

ಜೂಡೋದಲ್ಲಿ ಮಹಿಳೆಯರ ಜೆ-೨, ೫೨ ಕೆ.ಜಿ. ವಿಭಾಗದಲ್ಲಿ ಕೊಕಿಲಾ ಬೆಳ್ಳಿ ಹಾಗೂ ಪುರುಷರ ಜೆ-೧, ೬೦ ಕೆ.ಜಿ. ವಿಭಾಗದಲ್ಲಿ ಕಪಿಲ್ ಪರ್ಮಾರ್ ಕಂಚಿನ ಪದಕ ಗೆದ್ದಿದ್ದಾರೆ.  ಪ್ಯಾರಾ ಈಜು ಸ್ಪರ್ಧೆಯ ಪುರುಷರ ೧೦೦ ಮೀಟರ್ ಫ್ರೀಸ್ಟೈಲ್ ಎಸ್-೧೩ ವಿಭಾಗದಲ್ಲಿ ರವಿ ಕಾರ್ತಿಕ್ ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿದ್ದಾರೆ.

ಪದಕ ವಿಜೇತರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕರು ಅಭಿನಂದಿಸಿದ್ದಾರೆ.

__________ ಮುಕ್ತಾಯ __________